ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 90 ಜಿಪಸ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 22-09-2015

# ಸುತ್ತೋಲೆ

**ವಿಷಯ:** ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅಭಿವೃದ್ಧಿಯೋಜನೆ (GPDP - ಮುನ್ನೋಟ ವರದಿ) ತಯಾರಿಸುವ ಸಂಬಂಧ ಸಿದ್ಧಪಡಿಸಲಾದ ಟೂಲ್‌ಕಿಟ್ ಕುರಿತು.

**ಉಲ್ಲೇಖ:** ಸಮಸಂಖ್ಯೆಯ ಸರ್ಕಾರದ ಆದೇಶ, ದಿನಾಂಕ: 31.08.2015

***

ಗ್ರಾಮ ಪಂಚಾಯತಿ ಹಂತದಲ್ಲಿ ಅನುಷ್ಠಾನಗೊಳಿಸುವ ಎಲ್ಲಾ ಯೋಜನೆ/ಕಾರ್ಯಕ್ರಮಗಳನ್ನು ಒಗ್ಗೂಡಿಸಿಕೊಂಡು ರಾಜ್ಯದ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆ (GPDP – ಮುನ್ನೋಟ ವರದಿ) ತಯಾರಿಸಲು ಉಲ್ಲೇಖದ ಸರ್ಕಾರದ ಆದೇಶದ ಮೂಲಕ ಆದೇಶಿಸಲಾಗಿದೆ. ಅಂತೆಯೇ ಸದರಿ ಆದೇಶದಲ್ಲಿ "ಟೂಲ್‌ಕಿಟ್" ಅನ್ನು ಅನುಮೋದಿಸಿ, ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ವಹಿಸಬೇಕಾದ ಕ್ರಮಗಳನ್ನು ಸಹ ನಿರ್ದಿಷ್ಟಪಡಿಸಲಾಗಿದೆ.

ಉಲ್ಲೇಖದ ಸರ್ಕಾರದ ಆದೇಶದ ಮುಂದುವರಿಕೆಯಾಗಿ, ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆ (GPDP – ಮುನ್ನೋಟ ವರದಿ) ತಯಾರಿಸುವಲ್ಲಿ ಅನುಸರಿಸಬೇಕಾದ ವಿಧಿ ವಿಧಾನಗಳನ್ನು ಸ್ಪಷ್ಟಪಡಿಸಿ "ಟೂಲ್‌ಕಿಟ್"ಅನ್ನು ಸಿದ್ಧಪಡಿಸಲಾಗಿದೆ. ಟೂಲ್‌ಕಿಟ್‌ನಲ್ಲಿರುವ ಸೂಚನೆಗಳು, ಮಾದರಿಗಳು, ನಿರ್ದೇಶನಗಳನ್ನು ಅಳವಡಿಸಿಕೊಂಡು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಇವರ ಮಾರ್ಗದರ್ಶನದಲ್ಲಿ ರಾಜ್ಯದ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆ (GPDP –ಮುನ್ನೋಟ ವರದಿ) ತಯಾರಿಕೆಗೆ ಅಗತ್ಯ ಕ್ರಮವಹಿಸಬೇಕೆಂದು ಸೂಚಿಸಲಾಗಿದೆ.

"ಟೂಲ್‌ಕಿಟ್" ಪ್ರತಿಯು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಯ ಗಣಕಜಾಲ ವಿಳಾಸ: http://www.sirdmysore.gov.in ರ ಮುಖಪುಟದಲ್ಲಿ GPDP Toolkit ನಾಮಾಂಕಿತದೊಂದಿಗೆ ಪ್ರದರ್ಶಿಸಲಾಗುತ್ತಿದ್ದು ಡೌನ್‌ಲೋಡ್ ಮಾಡಿಕೊಳ್ಳುವುದು.

(ಸಿ.ಬಲರಾಮ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ರಾಜ್ಯದ ಎಲ್ಲಾ ಜಿಲ್ಲೆಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಜ್ಯದ ಎಲ್ಲಾ ತಾಲ್ಲೂಕುಗಳು.
3. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಗಣಕ ಕೋಶ/ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಗಣಕ ಜಾಲದಲ್ಲಿ ಅಳವಡಿಸಲು/ಮಾಸಪತ್ರಿಕೆಯಲ್ಲಿ ಪ್ರಕಟಿಸಲು)
5. ಶಾಖಾ ರಕ್ಷಾ ಕಡತಕ್ಕೆ
6. ಕಛೇರಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
4. ಎಲ್ಲಾ ಆಯುಕ್ತರುಗಳು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.